# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ : ಸ.ಅ/ವಾರ್ಡ್ ಸಮಿತಿ/02/ಸಭೆ– 3/2020–21 ದಿನಾಂಕ : 03–11–2020

## –: ಸಭಾ ಸೂಚನಾ ಪತ್ರ :–

ಉಲ್ಲೇಖ : 1) ಮಾನ್ಯ ಆಯುಕ್ತರ ಕಛೇರಿಯ ತಿದ್ದುಪಡಿ ಆದೇಶ ಸಂಖ್ಯೆ : ಬಿ12(5)ಪಿಆರ್/35/ 2020–21 ದಿನಾಂಕ : 02–10–2020.

–****–

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ, ಸರ್ವಜ್ಞನಗರ ವಿಭಾಗ, ಮಾರುತಿಸೇವಾನಗರ ಉಪವಿಭಾಗ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ–29 ಕಾಚರಕನಹಳ್ಳಿಯ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ : 07–11–2020 ಶನಿವಾರ ರಂದು ಬೆಳಿಗ್ಗೆ 10–30 ಗಂಟೆಗೆ ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ನಿಯೋಜಿಸಿರುವ ವಾರ್ಡ್‌ನ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ, ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಸದರಿ ಸಭೆಗೆ ಎಲ್ಲಾ ಸದಸ್ಯರು ಸಕಾಲದಲ್ಲಿ ಆಗಮಿಸಿ ಸಭೆಯನ್ನು ಯಶಸ್ವಿಗೊಳಿಸಲು ಕೋರಿದೆ.

## –: ಸಭಾ ಅಜೆಂಡಾ :–

| | |
|---|---|
| 1 | ವಾರ್ಡಿನ ವಿವಿಧ ಬಡಾವಣೆಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ. |
| 2 | ವಾರ್ಡಿನ ಘನತ್ಯಾಜ್ಯ ನಿರ್ವಹಣೆಯ ಬಗ್ಗೆ. |
| 3 | ಕಂದಾಯ ಇಲಾಖೆಗೆ ಸಂಬಂಧಿಸಿದ ಬಗ್ಗೆ. |
| 4 | ನೀರು ಸರಬರಾಜು ಮತ್ತು ಒಳಚರಂಡಿಗೆ (BWSSB) ಸಂಬಂಧಿಸಿದ ವಿಷಯಗಳ ಬಗ್ಗೆ. |
| 5 | ವಿದ್ಯುತ್ ಸರಬರಾಜು (Bescom) ಸಂಬಂಧಿಸಿದ ವಿಷಯಗಳ ಬಗ್ಗೆ. |
| 6 | ಉದ್ಯಾನವನ ಮತ್ತು ಬೀದಿ ದೀಪ ನಿರ್ವಹಣೆಯ ಕುರಿತು |
| 7 | Traffic isues and Law and Order issues |
| 8 | ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ಬಗ್ಗೆ ಚರ್ಚಿಸುವ ಬಗ್ಗೆ. |
| 9 | ಮಾನ್ಯ ನೋಡಲ್ ಅಧಿಕಾರಿಯವರ ಅಪ್ಪಣೆ ಮೇರೆಗೆ ಚರ್ಚಿಸಬಹುದಾದ ಇತರೆ ವಿಷಯಗಳು. |

(ನೋಡಲ್ ಅಧಿಕಾರಿ ರವರ ಆದೇಶದ ಮೇರೆಗೆ)

ಸಹಿ/–
ಕಾರ್ಯದರ್ಶಿ ವಾರ್ಡ್ ಸಮಿತಿ–29
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್–29

<u>ಪ್ರತಿಯನ್ನು:–</u>

1. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್ ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.

2. ಶ್ರೀ ಉತ್ತಪ್ಪ, ಸದಸ್ಯರು (ಅಧ್ಯಕ್ಷರು, ಹೆಚ್.ಆರ್.ಬಿ.ಆರ್ 3ನೇ ಬ್ಲಾಕ್ ಅಸೋಸಿಯೇಷನ್) ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.
3. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.
4. ವಾರ್ಡ್ ಸಮಿತಿಯ ಎಲ್ಲಾ ಸದಸ್ಯರುಗಳ ಮಾಹಿತಿಗಾಗಿ ಹಾಗೂ ಸಭ್ಭೆಯಲ್ಲಿ ಭಾಗವಹಿಸಲು ಕೋರಿದೆ.
5. ಕಲ್ಯಾಣಾಧಿಕಾರಿಗಳು, ಪೂರ್ವ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ
6. ಅರಣ್ಯ ಸಂರಕ್ಷಣಾಧಿಕಾರಿಗಳು, ಪೂರ್ವ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ
7. ಸಹಾಯಕ ಕಾರ್ಯಪಾಲಕ ಅಭಿಯಂತರರು, (BWSSB) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, (Bescom) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ (SWM) (ಸರ್ವಜ್ಞನಗರ), ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
10. ಸಹಾಯಕ ಕಂದಾಯ ಅಧಿಕಾರಿಗಳು, ಹೆಚ್.ಬಿ.ಆರ್ ಲೇಔಟ್ ಉಪವಿಭಾಗ, ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂದಿಯನ್ನು ನಿಯೋಜಿಸಲು ಕೋರಿದೆ.
11. ಪೋಲೀಸ್ ಇನ್ಸ್‌ಫೆಕ್ಟರ್ (ಸಂಚಾರ) ಬಾಣಸವಾಡಿ ಪೋಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಿಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
12. ಪೋಲೀಸ್ ಇನ್ಸ್‌ಫೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೋಲೀಸ್ ಠಾಣೆ ರವರು ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ರಸ್ತೆಗಳು ಮತ್ತು ಮೂಲಭೂತ ಸೌಕರ್ಯಗಳು ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ (SWD) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
15. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೀದಿ ದೀಪಗಳ ವಿಭಾಗ–ಪೂರ್ವ), ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
16. ಆರೋಗ್ಯ ವೈದ್ಯಾಧಿಕಾರಿಗಳು, ಕಾಚರಕನಹಳ್ಳಿ ರವರು ಖುದ್ದಾಗಿ ಹಾಜರಾಗಲು ಕೋರಿದೆ.
17. ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ ರವರ ಮಾಹಿತಿಗಾಗಿ ರವಾನಿಸಿದೆ.

ಕಾರ್ಯದರ್ಶಿ ವಾರ್ಡ್ ಸಮಿತಿ–29
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್–29

Banaswadi Traffic Police, Bengaluru — Dt: 06/11/2020
Banaswadi Police Station, Bangalore — 6/11/20
Office of Assistant Executive Engineer, B.W.S.S.B, East-2-1 Subdivision, H.R.B.R Layout, Bangalore — Date 06-11-2
AEE Bescom 06/11
6/11/2020

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಛೇರಿಯ ಸಭಾಂಗಣದಲ್ಲಿ ದಿನಾಂಕ: 07-11-2020 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ.ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಶ್ರೀ.ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
4. ಶ್ರೀ.ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
5. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್,
6. ಶ್ರೀ ಉತ್ತಪ್ಪ, ಸದಸ್ಯರು (ಅಧ್ಯಕ್ಷರು, ಹೆಚ್.ಆರ್.ಬಿ.ಆರ್ 3ನೇ ಬ್ಲಾಕ್ ಅಸೋಸಿಯೇಷನ್),
7. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ಕಾಣಿಕ್‌ರಾಜ್, ಕರ ವಸೂಲಿಗಾರರು,
2. ಶ್ರೀ ಶ್ರೀನಿವಾಸ್, ಕರ ವಸೂಲಿಗಾರರು, ಕಂದಾಯ ವಿಭಾಗ,
3. ಶ್ರೀ.ಅಶೋಕ್, ಸಹಾಯಕ ಅಭಿಯಂತರರು, ಬೆಸ್ಕಾಂ,
4. ಸಹಾಯಕ ಅಭಿಯಂತರರು, ಬೆಸ್ಕಾಂ,
5. ಶ್ರೀ.ದವಲ್, ಸಹಾಯಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ),
6. ಶ್ರೀ.ನಾರಾಯಣಸ್ವಾಮಿ, ಸಂಚಾರಿ ಸಹಾಯಕ ಸಬ್ ಇನ್ಸ್‌ಪೆಕ್ಟರ್, ಬಾಣಸವಾಡಿ ಪೊಲೀಸ್ ಠಾಣೆ,
7. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
8. ಡಾ॥ ಶಾಹೀನಾ, ವೈದ್ಯಾಧಿಕಾರಿಗಳು,
9. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,

ಈ ಸಭೆಗೆ ಹಾಜರಾಗಿದ್ದ ಮೇಲ್ಕಂಡ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1) **ಶ್ರೀ ಉತ್ತಪ್ಪ, ಸದಸ್ಯರು (ಅಧ್ಯಕ್ಷರು, ಹೆಚ್.ಆರ್.ಬಿ.ಆರ್ 3ನೇ ಬ್ಲಾಕ್ ಅಸೋಸಿಯೇಷನ್) ರವರು ಮಾತನಾಡಿ,** ಹೆಚ್.ಆರ್.ಬಿ.ಆರ್ 3ನೇ ಬ್ಲಾಕಿನಲ್ಲಿ ರೋಡ್ ಹಂಪ್ಸ್ ಇಲ್ಲದೇ ವೇಗವಾಗಿ ಬರುವ ವಾಹನಗಳಿಂದ ರಸ್ತೆಯಲ್ಲಿ ಸಾರ್ವಜನಿಕರು ನಿರ್ಭಯವಾಗಿ ಓಡಾಡಲು ಭಯ ಭೀತರಾಗುತ್ತಿದ್ದು, 3ನೇ ಬ್ಲಾಕಿನಲ್ಲಿ ಅವಶ್ಯಕತೆ ಇರುವ ಕಡೆಗಳಲ್ಲಿ ವೈಜ್ಞಾನಿಕ ಹಂಪ್‌ಗಳನ್ನು ಅಳವಡಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಈ ಬಗ್ಗೆ ಕೂಲಂಕುಷವಾಗಿ ಚರ್ಚಿಸಲಾಗಿ, ಕೂಡಲೇ ಟ್ರಾಫಿಕ್ ಇಂಜಿನಿಯರಿಂಗ್ ಸೆಲ್, ಮುಖ್ಯ ಕಛೇರಿ ರವರಿಗೆ ಪತ್ರ ಬರೆದು ಅವಶ್ಯಕತೆ ಇರುವ ಕಡೆ ಪರಿಶೀಲಿಸಿ, ವೈಜ್ಞಾನಿಕ ರಸ್ತೆ ಹಂಪ್‌ಗಳನ್ನು (HRPC) ಅಳವಡಿಸಲು ಸೂಚಿಸಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

2) **ಶ್ರೀ ಉತ್ತಪ್ಪ, ಸದಸ್ಯರು (ಅಧ್ಯಕ್ಷರು, ಹೆಚ್.ಆರ್.ಬಿ.ಆರ್ 3ನೇ ಬ್ಲಾಕ್ ಅಸೋಸಿಯೇಷನ್) ರವರು ಮಾತನಾಡಿ,** ವಾರ್ಡ್ ಪ್ರದೇಶದ ಸರ್ವಿಸ್ ರಸ್ತೆಯಲ್ಲಿರುವ ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಕಛೇರಿ ಹತ್ತಿರ ಹಾಗೂ 5ನೇ ಎ ಕ್ರಾಸ್ ಹತ್ತಿರ ವಿದ್ಯುತ್ ಸರಬರಾಜು ತಂತಿಗಳನ್ನು ಯದ್ವಾ ತದ್ವ ಅಳವಡಿಸಲಾಗಿದ್ದು, ಇದರಿಂದ ವಾಹನ

ಸಂಚಾರಕ್ಕೆ ಅಡಚಣೆಯಾಗಿರುತ್ತದೆ. ಹಾಗೂ ನಿರಂತರವಾಗಿ ವಿದ್ಯುತ್ ಶಬ್ದ ಕೇಳಿಸುತ್ತಿರುತ್ತದೆ. ಆದ್ದರಿಂದ ಈ ಸದರಿ ಕೇಬಲ್‌ಗಳನ್ನು ತೆಗೆದು ಕ್ರಮಬದ್ಧವಾಗಿ ಅಳವಡಿಸಿ, ಸಾರ್ವಜನಿಕರು ರಸ್ತೆಯಲ್ಲಿ ನಿರ್ಭಯವಾಗಿ ಓಡಾಡಲು ಅನುವು ಮಾಡಿಕೊಡುವಂತೆ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಈ ಬಗ್ಗೆ ಕೂಲಂಕುಷವಾಗಿ ಚರ್ಚಿಸಲಾಗಿ, ಮಾನ್ಯ ಅಧ್ಯಕ್ಷರು ಮಾತನಾಡಿ, ಕೂಡಲೇ ಸದರಿ ಕೇಬಲ್‌ಗಳನ್ನು ತೆಗೆದು ಕ್ರಮಬದ್ಧವಾಗಿ ಹಾಗೂ ಶಾಶ್ವತವಾಗಿ ಅಳವಡಿಸಲು ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಇಂಜಿನಿಯರ್ ರವರಿಗೆ ಸಭೆಯು ಸರ್ವಾನುಮತದಿಂದ ಆದೇಶಿಸಿತು.

3) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿ ದಿನನಿತ್ಯ ಬೆಸ್ಕಾಂ ವಿಭಾಗದವರಿಂದ ರಸ್ತೆಗಳಲ್ಲಿನ ಮರಗಳ ಕೊಂಬೆಗಳನ್ನು ಟ್ರಿಮ್ ಮಾಡುವ ಕಾಮಗಾರಿಯು ನಿರಂತರವಾಗಿ ಸಾಗುತ್ತಿರುತ್ತದೆ. ಆದರೆ ಕತ್ತರಿಸಿದ ಮರದ ಕೊಂಬೆಗಳನ್ನು ಪೂರ್ಣ ಪ್ರಮಾಣದಲ್ಲಿ ಸಾಗಿಸದೇ ಇರುವುದು ಕಂಡುಬಂದಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಿ, ಟ್ರಿಮ್ ಮಾಡಿದ ಮರದ ಕೊಂಬೆಗಳನ್ನು ಕೂಡಲೇ ವಿಲೇವಾರಿ ಮಾಡಲು ಸಭೆಯಲ್ಲಿ ಹಾಜರಿದ್ದ, ಬೆಸ್ಕಾಂ ಅಭಿಯಂತರರಿಗೆ ಸಭೆಯು ಸರ್ವಾನುಮತದಿಂದ ಆದೇಶಿಸಿತು.

4) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿ ಸಾರ್ವಜನಿಕರು ಕಟ್ಟಡಗಳ ಭಗ್ನಾವಶೇಷಗಳನ್ನು ರಸ್ತೆಗಳ ಪಾದಾಚಾರಿ ಮಾರ್ಗದಲ್ಲಿ ರಾತ್ರಿ ವೇಳೆಯಲ್ಲಿ ಸುರಿದಿರುತ್ತಾರೆ. ಇಂತಹ ಪ್ರಕರಣಗಳನ್ನು ಪತ್ತೆ ಹಚ್ಚಿ ದಂಡ ವಿಧಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಈ ಬಗ್ಗೆ ಚರ್ಚಿಸಲಾಗಿ, ಸಭೆಯಲ್ಲಿ ಹಾಜರಿದ್ದ ಅಭಿಯಂತರರು ಹಾಗೂ ಆರೋಗ್ಯ ನಿರೀಕ್ಷಕರು ಮಾತನಾಡಿ, ಇಂತಹ ಪ್ರಕರಣಗಳನ್ನು ಪತ್ತೆ ಹಚ್ಚಿ ದಂಡ ವಿಧಿಸಲಾಗುವುದು ಎಂದು ಸಭೆಗೆ ತಿಳಿಸಿದರು.

5) **ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್ ರವರು ಮಾತನಾಡಿ,** ಜಲವಾಯು ವಿಹಾರ್ ಹಾಗೂ ಸುತ್ತಮುತ್ತಲ ಪ್ರದೇಶದಲ್ಲಿ ಸ್ವಚ್ಚತಾ ಕಾರ್ಯಕ್ರಮ ಕ್ರಮಬದ್ಧವಾಗಿ ಸಾಗುತ್ತಿರುತ್ತದೆ. ಆದರೆ ಜಲವಾಯು ವಿಹಾರ್‌ನಲ್ಲಿ ಸೊಳ್ಳೆಗಳ ಕಾಟ ಹೆಚ್ಚಾಗಿರುವುದರಿಂದ ಫಾಗಿಂಗ್ ಮಾಡಲು ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಆರೋಗ್ಯ ನಿರೀಕ್ಷಕರು, ಫಾಗಿಂಗ್ ಮಾಡುವ ನೌಕರನು ರಜೆಯಲ್ಲಿ ಇದ್ದ ಕಾರಣ ಫಾಗಿಂಗ್ ಮಾಡಲು ಸಾಧ್ಯವಾಗಿರುವುದಿಲ್ಲ, ಕೂಡಲೇ ಪರ್ಯಾಯ ವ್ಯವಸ್ಥೆ ಮಾಡಿ, ಫಾಗಿಂಗ್ ಮಾಡಲು ಕ್ರಮ ವಹಿಸಲಾಗುವುದು ಎಂದು ಸಭೆಗೆ ತಿಳಿಸಿದರು.

6) **ಶ್ರೀ ಉತ್ತಪ್ಪ, ಸದಸ್ಯರು (ಅಧ್ಯಕ್ಷರು, ಹೆಚ್.ಆರ್.ಬಿ.ಆರ್ 3ನೇ ಬ್ಲಾಕ್ ಅಸೋಸಿಯೇಷನ್) ರವರು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿ ಬೀದಿ ದೀಪಗಳು ಭಾರೀ ಸಂಖ್ಯೆಯಲ್ಲಿ ಉರಿಯುತ್ತಿರುವುದಿಲ್ಲ ಮತ್ತು ವಾರ್ಡ್ ಪ್ರದೇಶದ ಉದ್ಯಾನವನಗಳಲ್ಲಿ ರಾತ್ರಿ ಸಮಯದಲ್ಲಿ ಸಾರ್ವಜನಿಕರು ವ್ಯಾಯಾಮ ಮುಗಿಸಿ, ತೆರಳಿದ ನಂತರ ವಿದ್ಯುತ್ ದೀಪಗಳು ಉರಿಯುತ್ತಿರುತ್ತವೆ. ಇದನ್ನು ತಡೆಯಬೇಕೆಂದು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಬೀದಿ ದೀಪಗಳ ವಿಭಾಗದವರು ಎರಡು ಸಭೆಗಳಲ್ಲಿಯೂ ಗೈರಾಗಿರುತ್ತಾರೆ. ಇದನ್ನು ಸಭೆಯು ಆಕ್ಷೇಪಿಸಿ, ಈ ಬಗ್ಗೆ ಚರ್ಚಿಸಲಾಗಿ, ದುರಸ್ತಿಯಾಗಿರುವ ಬೀದಿ ದೀಪಗಳನ್ನು ಕೂಡಲೇ ದುರಸ್ಥಿ ಪಡಿಸಿ ಕ್ರಮ ಕೈಗೊಳ್ಳಲು ಹಾಗೂ ಮುಂದಿನ ಸಭೆಗೆ ಕಡ್ಡಾಯವಾಗಿ ಹಾಜರಾಗಲು ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ದೀಪಗಳ ವಿಭಾಗ ರವರಿಗೆ ಮತ್ತೊಮ್ಮೆ ಪತ್ರ ಬರೆಯಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

7) **ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್ ರವರು ಮಾತನಾಡಿ,** ವಾರ್ಡ್ ಪ್ರದೇಶದ ಸುಖ್ ಸಾಗರ್ ಹೋಟೆಲ್ ರಸ್ತೆಯಲ್ಲಿ ರಾತ್ರಿ ಸಮಯದಲ್ಲಿ ದೂಮಪಾನ, ಮಧ್ಯಪಾನ ಸೇವಿಸಿ, ಜೋರಾಗಿ ಗಲಾಟೆ ಮಾಡುವುದು ಅನೈತಿಕ ಚಟುವಟಿಕೆಗಳಲ್ಲಿ ಭಾಗವಹಿಸುವುದು ಇತ್ಯಾಧಿ ಅಧಿಕ ಪ್ರಸಂಗಗಳು ನಡೆಯುತ್ತಿರುತ್ತವೆ ಎಂದು ಸಭೆಯ ಗಮನಕ್ಕೆ ತಂದಾಗ, ಸಭೆಯಲ್ಲಿ ಈ ಬಗ್ಗೆ

ಚರ್ಚಿಸಲಾಗಿ, ಕಾನೂನು ಸುವ್ಯವಸ್ಥೆ, ಆರಕ್ಷಕ ಅಧಿಕಾರಿಗಳು ಸದರಿ ರಸ್ತೆಯ ಪ್ರದೇಶದಲ್ಲಿ ರಾತ್ರಿ ಪಾಳಿಯಲ್ಲಿ ತಮ್ಮ ದೈನಂದಿನ ಗಸ್ತನ್ನು ತೀವ್ರಗೊಳಿಸಲು ಹಾಗೂ ವಿಶೇಷ ನಿಗಾ ಇಡಲು ಸಭೆಯಲ್ಲಿ ಹಾಜರಿದ್ದ ಕಾನೂನು ಸುವ್ಯವಸ್ಥೆ, ಪೊಲೀಸ್ ಅಧಿಕಾರಿಗಳಿಗೆ ಸಭೆಯು ಸರ್ವಾನುಮತದಿಂದ ಆದೇಶಿಸಿತು.

8) **ಮಾನ್ಯ ಅಧ್ಯಕ್ಷರು ಕೋವಿಡ್ ಬಗ್ಗೆ ಪ್ರಸ್ತಾಪಿಸಿದಾಗ,** ಸಭೆಯಲ್ಲಿ ಹಾಜರಿದ್ದ ವೈದ್ಯಾಧಿಕಾರಿಗಳು ಮಾತನಾಡಿ, ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ 501 ಕೋವಿಡ್ ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ 304 ಹೋಮ್ ಐಸೋಲೇಷನ್ ಮುಗಿಸಿ, ಬಿಡುಗಡೆಯಾಗಿರುತ್ತಾರೆ. 166 ಜನ ಆಸ್ಪತ್ರೆಯಿಂದ ಗುಣಮುಖರಾಗಿ ಬಿಡುಗಡೆಗೊಂಡಿರುತ್ತಾರೆ. 18 ಜನ ಮರಣ ಹೊಂದಿರುತ್ತಾರೆ. ನಂತರ 13 ಜನ ಮಾತ್ರ ಸಕ್ರಿಯ ಪ್ರಕರಣಗಳಾಗಿರುತ್ತದೆ ಎಂದು ಸಭಾ ಗಮನಕ್ಕೆ ತಿಳಿಸುತ್ತಾ, ಕೋವಿಡ್ ಪ್ರಕರಣಗಳ ತಪಾಸಣೆಯನ್ನು ನಿರಂತರವಾಗಿ ಮುಂದುವರೆಸಲಾಗುತ್ತಿರುತ್ತದೆ. ಇದರೊಂದಿಗೆ ಸಾರ್ವಜನಿಕರ ತಿಳುವಳಿಕೆಗಾಗಿ ವಾಣಿಜ್ಯ ಪ್ರದೇಶಗಳಲ್ಲಿ, ಮಾರುಕಟ್ಟೆಗಳಲ್ಲಿ, ರೆಸ್ಟೋರೆಂಟ್‌ಗಳಲ್ಲಿ, ಹೋಟೆಲ್‌ಗಳಲ್ಲಿ, ಪೆಟ್ರೋಲ್ ಬಂಕ್‌ಗಳಲ್ಲಿ, ಸಾರ್ವಜನಿಕ ಕಛೇರಿಗಳಲ್ಲಿ ಮೈಕ್ ಮುಖಾಂತರ ಪ್ರಚಾರ ಮಾಡಿ, ಕೋವಿಡ್ ತಪಾಸಣೆಯನ್ನು ಮಾಡಲಾಗುತ್ತಿರುತ್ತದೆ ಎಂದು ಸಭೆಗೆ ವೈದ್ಯಾಧಿಕಾರಿಗಳು ವಿವರಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು | Prasanna Kumar A 12/11/2020 |
| ಸಹಾಯಕ ಅಭಿಯಂತರರು | ಅಧ್ಯಕ್ಷರು |
| ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ | (ನೋಡೆಲ್ ಅಧಿಕಾರಿಗಳು) |
| | ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ |

<u>ಪ್ರತಿಯನ್ನು</u>

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ. 12/11/2020
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ. 12/11/2020
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ. 12/11/2020
5) ವಾರ್ಡ್ ಕಮಿಟಿಯ ಸದಸ್ಯರಿಗೆ.
6) ಕಛೇರಿ ಕಡತಕ್ಕೆ.